ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	204
ಸದಸ್ಯರ ಹೆಸರು	ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	14.12.2021
ಉತ್ತರಿಸುವ ಸಚಿವರು	ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಕೊಡಗು ಜಿಲ್ಲೆಯಲ್ಲಿ ಎಷ್ಟು ಎಂ-ಸ್ಯಾಂಡ್ ಘಟಕಗಳು ಪ್ರಸ್ತುತ, ಕಾರ್ಯ ನಿರ್ವಹಿಸುತ್ತಿವೆ; ಅವುಗಳ ಪ್ರತಿ ದಿನದ ಎಂ-ಸ್ಯಾಂಡ್ ಉತ್ಪಾದನಾ ಸಮಾರ್ಥ್ಯ ಎಷ್ಟು;	ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ 04 ಕ್ರಷರ್ ಘಟಕಗಳಲ್ಲಿ ಎಂ-ಸ್ಯಾಂಡ್ ಉತ್ಪಾದಿಸಲಾಗುತ್ತಿದೆ. ಸದರಿ 04 ಸ್ಟೋನ್ ಕ್ರಷರ್ ಘಟಕಗಳಿಂದ ಪ್ರತಿ ದಿನ ಅಂದಾಜು 150 ಮೆಟ್ರಿಕ್ ಟನ್ ಎಂ-ಸ್ಯಾಂಡ್ ನ್ನು ಪೂರೈಸಲಾಗುತ್ತದೆ. ಇದಲ್ಲದೆ ನೆರೆಯ ಹಾಸನ ಮತ್ತು ಮೈಸೂರು ಜಿಲ್ಲೆಗಳಿಂದ ಕೊಡಗು ಜಿಲ್ಲೆಗೆ ಎಂ-ಸ್ಯಾಂಡ್ ಸಾಗಾಣಿಕೆಯಾಗುತ್ತಿರುತ್ತದೆ.
(ಆ)	ಜಿಲ್ಲೆಯಲ್ಲಿನ ಬೇಡಿಕೆಗೆ ಅನುಗುಣವಾಗಿ ಎಂ-ಸ್ಯಾಂಡ್ ಸಾಮಗ್ರಿಗಳು ಹಾಲಿ ಕಾರ್ಯ ನಿರ್ವಹಿಸುತ್ತಿರುವ ಎಂ-ಸ್ಯಾಂಡ್ ಘಟಕಗಳಿಂದ ಉತ್ಪಾದನೆಯಾಗುತ್ತಿದೆಯೇ;	ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ 04 ಕ್ರಷರ್ ಘಟಕಗಳಲ್ಲಿ ಎಂ-ಸ್ಯಾಂಡ್ ಉತ್ಪಾದಿಸಲಾಗುತ್ತಿದೆ. ಇದಲ್ಲದೆ ನೆರೆಯ ಹಾಸನ ಮತ್ತು ಮೈಸೂರು ಜಿಲ್ಲೆಗಳಿಂದ ಕೊಡಗು ಜಿಲ್ಲೆಗೆ ಎಂ-ಸ್ಯಾಂಡ್ ಸಾಗಾಣಿಕೆಯಾಗುತ್ತಿರುತ್ತದೆ.
(ಇ)	ಜಿಲ್ಲೆಯಲ್ಲಿನ ಬೇಡಿಕೆಗೆ ಅನುಗುಣವಾಗಿ ಎಂ-ಸ್ಯಾಂಡ್ ಸಾಮಗ್ರಿ, ಎಂ-ಸ್ಯಾಂಡ್ ಘಟಕಗಳಿಂದ ಉತ್ಪಾದನೆ ಯಾಗದಿದ್ದಲ್ಲಿ ನಿರ್ಮಾಣ ಕಾಮಗಾರಿಗಳಿಗೆ ತೊಂದರೆ ಯಾಗದಂತೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?	ಕೊಡಗು ಜಿಲ್ಲೆಯಲ್ಲಿನ ಸಾರ್ವಜನಿಕ ಮತ್ತು ಸರ್ಕಾರಿ ಕಾಮಗಾರಿಗಳಿಗೆ ಮರಳು ಪೂರೈಸುವ ಸಂಬಂಧ 17 ನದಿ ಮರಳು ಬ್ಲಾಕ್ ಗಳನ್ನು ಗುರುತಿಸಿ, ಗುತ್ತಿಗೆ ಮಂಜೂರಾತಿ ನೀಡಲಾಗಿರುತ್ತದೆ. ಈ ಮರಳು ಬ್ಲಾಕುಗಳಿಂದ ವಾರ್ಷಿಕವಾಗಿ ಒಟ್ಟು 68,650 ಮೆಟ್ರಿಕ್ ಟನ್ ಪ್ರಮಾಣದ ನದಿ ಮರಳನ್ನು ಪೂರೈಸಲಾಗುತ್ತಿದೆ. ಕೊಡಗು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 04 ಎಂ-ಸ್ಯಾಂಡ್ ಘಟಕಗಳಿಂದ ಪ್ರತಿ ದಿನ ಅಂದಾಜು 150 ಮೆಟ್ರಿಕ್ ಟನ್ ಪ್ರಮಾಣದ ಎಂ-ಸ್ಯಾಂಡ್ ಉತ್ಪಾದಿಸಿ, ಸರಬರಾಜು ಮಾಡಲಾಗುತ್ತಿದೆ. ಇದಲ್ಲದೆ ನೆರೆಯ ಹಾಸನ, ಚಾಮರಾಜನಗರ, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಿಂದ ಕೊಡಗು ಜಿಲ್ಲೆಗೆ ಪ್ರತಿ ದಿನ ಅಂದಾಜು 200 ಮೆಟ್ರಿಕ್ ಟನ್ ಪ್ರಮಾಣದ ಎಂ-ಸ್ಯಾಂಡ್ ಸಾಗಾಣಿಕೆಯಾಗುತ್ತಿದ್ದು, ಜಿಲ್ಲೆಯ ನಿರ್ಮಾಣ ಕಾಮಗಾರಿಗಳಿಗೆ ಮರಳಿನ ಅಭಾವವಿರುವುದಿಲ್ಲ.

		• ಸಹಾಯಕ ಕಾರ್ಯಪಾಲಕ ಅಭಿಯಂತರರು, ಹಾರಂಗಿ ಪುನರ್ವಸತಿ ವಿಭಾಗ, ಕುಶಾಲನಗರ ಇವರು ವಾರ್ಷಿಕವಾಗಿ ಸುಮಾರು 28,000 ಮೆಟ್ರಿಕ್ ಟನ್ ಗಳಷ್ಟು ಪ್ರಮಾಣದ ಎಂ-ಸ್ಯಾಂಡ್ ಅವಶ್ಯಕತೆ ಇರುತ್ತದೆಂದು ತಿಳಿಸಿರುತ್ತಾರೆ. • ಸಹಾಯಕ ಕಾರ್ಯಪಾಲಕ ಅಭಿಯಂತರರು, ಸಣ್ಣ ನೀರಾವರಿ ಇಲಾಖೆ, ಮಡಿಕೇರಿ ಇವರು ಸುಮಾರು 11,478 ಮೆಟ್ರಿಕ್ ಟನ್ ಗಳಷ್ಟು ಪ್ರಮಾಣದ ಎಂ-ಸ್ಯಾಂಡ್ ಬೇಡಿಕೆ ಇರುತ್ತದೆಂದು ತಿಳಿಸಿರುತ್ತಾರೆ. • ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಮಡಿಕೇರಿ, ಇವರು ವಾರ್ಷಿಕವಾಗಿ ಸುಮಾರು 40,000 ಮೆಟ್ರಿಕ್ ಟನ್ ಗಳಷ್ಟು ಪ್ರಮಾಣದ ಎಂ-ಸ್ಯಾಂಡ್ ಬೇಡಿಕೆ ಇರುತ್ತದೆಂದು ತಿಳಿಸಿರುತ್ತಾರೆ. • ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಮಡಿಕೇರಿ ಇವರು ವಾರ್ಷಿಕವಾಗಿ ಸುಮಾರು 34,400 ಮೆಟ್ರಿಕ್ ಟನ್ ಗಳಷ್ಟು ಪ್ರಮಾಣದ ಎಂ-ಸ್ಯಾಂಡ್ ಬೇಡಿಕೆ ಇರುತ್ತದೆಂದು ತಿಳಿಸಿರುತ್ತಾರೆ. • ಇತರೆ ಇಲಾಖೆಯವರು ಎಂ-ಸ್ಯಾಂಡ್ ಸಮರ್ಪಕವಾಗಿ ದೊರೆಯುತ್ತಿರುವುದಾಗಿ ಮಾಹಿತಿ ನೀಡಿರುತ್ತಾರೆ. ಮುಂದುವರೆದು ಹೊಸ ಮರಳು ನೀತಿ 2020 ರಂತೆ IV, V & VI ಶ್ರೇಣಿಯಲ್ಲಿ ಸರ್ಕಾರಿ ಕಾಮಗಾರಿಗಳಿಗೆ ಬಳಸಲು ಸೋಮವಾರಪೇಟೆ ತಾಲ್ಲೂಕಿನಲ್ಲಿ 06, ಮಡಿಕೇರಿ ತಾಲ್ಲೂಕಿನಲ್ಲಿ 02 ಮತ್ತು ವಿರಾಜಪೇಟೆ ತಾಲ್ಲೂಕಿನಲ್ಲಿ 03 ಸೇರಿ ಒಟ್ಟು 11 ಮರಳು ಬ್ಲಾಕ್ ಗಳನ್ನು ಗುರುತಿಸಿದ್ದು, ಸದರಿ ಬ್ಲಾಕ್ ಗಳಲ್ಲಿ ಅಂದಾಜು 31,220 ಮೆಟ್ರಿಕ್ ಟನ್ ನಷ್ಟು ಮರಳನ್ನು ಸರ್ಕಾರಿ ಕಾಮಗಾರಿಗಳಿಗೆ ಬಳಸಲು ಮೀಸಲಿರಿಸಲಾಗಿರುತ್ತದೆ ಹಾಗೂ ಪ್ರಗತಿ ಹಂತದಲ್ಲಿರುತ್ತದೆ. ಜಿಲ್ಲೆಯಲ್ಲಿ ಹೊಸದಾಗಿ ಎಂ-ಸ್ಯಾಂಡ್ ಘಟಕ ಸ್ಥಾಪಿಸಲು 04 ಅರ್ಜಿಗಳು ಸ್ವೀಕೃತವಾಗಿದ್ದು, ಲೈಸೆನ್ಸ್ ನೀಡುವ ಪ್ರಕ್ರಿಯೆ ಪ್ರಗತಿ ಹಂತದಲ್ಲಿರುತ್ತದೆ.

ಸಂಖ್ಯೆ ಸಿಐ 600 ಎಂಎಂಎನ್ 2021

(ಆಚಾರ್ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು
ವಿಕಲಚೇತನರ, ಹಿರಿಯ ನಾಗರಿಕರ
ಸಬಲೀಕರಣ ಸಚಿವರು.